ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಬಿ.ಎಂ.ಟಿ.ಸಿ ಯಲ್ಲಿ ವಿದ್ಯುತ್ ಚಾಲಿತ ಬಸ್ಸುಗಳ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು):-

921 (980) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿ ಬಿ.ಎಂ.ಟಿ.ಸಿ. ಬಸ್ಸುಗಳ ಹೊಗೆಯಿಂದ ಹೆಚ್ಚುತ್ತಿರುವ ವಾಯು ಮಾಲಿನ್ಯ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಬೆಂಗಳೂರು ನಗರದಲ್ಲಿ ವಾಯು ಮಾಲಿನ್ಯ ತಡೆಯಲು ವಿದ್ಯುತ್ ಚಾಲಿತ ಬಸ್ಸುಗಳ ಸೇವೆಯನ್ನು ನಾಗರಿಕರಿಗೆ ಒದಗಿಸುವ ಬಗ್ಗೆ ಸರ್ಕಾರದ ನಿಲುವೇನು;

(ಇ) ಇದುವರೆಗೆ ಬಿ.ಎಂ.ಟಿ.ಸಿ. ಯಲ್ಲಿ ಎಷ್ಟು ವಿದ್ಯುತ್ ಚಾಲಿತ ಬಸ್ಸುಗಳನ್ನು ಬಳಸಲಾಗುತ್ತಿದೆ ?